ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಸಾರ್ವಜನಿಕ ಲೆಕ್ಕಪತ್ರ ಸಮಿತಿ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ        ದಿನಾಂಕ : DATE : 22/7/2020

# ಆನ್‌ಲೈನ್‌ನಲ್ಲಿ ಪಿಎಸಿ ಸಭೆಗೆ ಎಚ್‌ಕೆ ಆಗ್ರಹ

ಬೆಂಗಳೂರು: ವೈದ್ಯಕೀಯ ಉಪಕರಣಗಳ ಖರೀದಿಯಲ್ಲಿ ಅವ್ಯವಹಾರದ ಆರೋಪಗಳು ಕೇಳಿ ಬರುತ್ತಿರುವ ಪ್ರಸ್ತುತ ಸಂದರ್ಭದಲ್ಲಿ ಗುರುತರ ಜವಾಬ್ದಾರಿ ಹೊಂದಿರುವ ಸಾರ್ವಜನಿಕ ಲೆಕ್ಕಪತ್ರ ಸಮಿತಿ (ಪಿಎಸಿ) ಸಭೆಯನ್ನು ಆನ್‌ಲೈನ್ ಮೂಲಕ ನಡೆಸಲು ಅವಕಾಶ ನೀಡುವಂತೆ ಸಮಿತಿ ಅಧ್ಯಕ್ಷ ಎಚ್. ಕೆ. ಪಾಟೀಲ್, ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರಿಗೆ ಆಗ್ರಹಿಸಿದ್ದಾರೆ.

ರಾಜ್ಯದಲ್ಲಿ ಕೊರೋನಾ ಸೋಂಕು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಸಭಾಧ್ಯಕ್ಷರು ಒಂದು ತಿಂಗಳ ಕಾಲ ವಿಧಾನಮಂಡಲ ಹಾಗೂ ವಿಧಾನಸಭೆಯ ವಿವಿಧ ಸಮಿತಿಗಳು ಯಾವುದೇ ಸಭೆ ನಡೆಸಬಾರದೆಂದು ಆದೇಶಿಸಿರುವ ಹಿನ್ನೆಲೆಯಲ್ಲಿ ಪಾಟೀಲ್ ಅವರು ಸಭಾಧ್ಯಕ್ಷರಿಗೆ ಪತ್ರ ಬರೆದಿದ್ದಾರೆ.

'ಸೋಂಕಿತರು ಹಾಗೂ ಶಂಕಿತರಿಗೆ ತ್ವರಿತ ಹಾಗೂ ಗುಣಮಟ್ಟದ ಚಿಕಿತ್ಸೆ ದೊರೆಯುತ್ತಿಲ್ಲ, ತಪ್ಪಿತಸ್ಥರನ್ನು ಗುರುತಿಸಿ ಕ್ರಮ ಕೈಗೊಳ್ಳಬೇಕು' ಎಂದು ಆಗ್ರಹಿಸಿದ್ದಾರೆ.